ಕರ್ನಾಟಕ ಸರ್ಕಾರ

ಕರ್ನಾಟಕ ಪರೀಕ್ಷಾ ಪ್ರಾಧಿಕಾರ

ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560 012. ದೂರವಾಣಿ: 080-23 460 460 (5 ಲೈನ್‌ಗಳು)
ಫ್ಯಾಕ್ಸ್: 080-23461576 ಇ-ಮೇಲ್: keauthority-ka@nic.in ವೆಬ್‌ಸೈಟ್: http://kea.kar.nic.in

ಸಂಖ್ಯೆ: ಇಡಿ/ಕೆಇಎ/ನೇಮಕಾತಿ/2022-23(ಕೆಕೆ) ದಿನಾಂಕ: 14-03-2022
ಸಂಖ್ಯೆ: ಇಡಿ/ಕೆಇಎ/ನೇಮಕಾತಿ/2022-23(ಆರ್‌ಪಿಸಿ) ದಿನಾಂಕ: 14-03-2022

ಅಧಿಸೂಚನೆ
ಕೆಆರ್‌ಐಡಿಎಲ್ - ನೇಮಕಾತಿ - 2022

ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಯಮಿತ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ) ಇಲ್ಲಿ ಖಾಲಿ ಇರುವ ಸಹಾಯಕ ಅಭಿಯಂತರರು ಗ್ರೇಡ್-1 (ಸಿವಿಲ್), ಕಿರಿಯ ಅಭಿಯಂತರರು (ಸಿವಿಲ್), ಪ್ರಥಮ ದರ್ಜೆ ಸಹಾಯಕರು ಮತ್ತು ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳ ನೇರ ನೇಮಕಾತಿಯನ್ನು ಸ್ಪರ್ಧಾತ್ಮಕ ಪರೀಕ್ಷೆಯ ಮೂಲಕ ಪ್ರಕ್ರಿಯೆ ಪ್ರಾರಂಭಿಸಲು ವ್ಯವಸ್ಥಾಪಕ ನಿರ್ದೇಶಕರು, ಕೆಆರ್‌ಐಡಿಎಲ್, ಬೆಂಗಳೂರು ಇವರು ಪತ್ರ ದಿನಾಂಕ 19-02-2022 ರಲ್ಲಿ ಕೋರಿರುವ ಹಿನ್ನೆಲೆಯಲ್ಲಿ, ಕರ್ನಾಟಕ ನಾಗರೀಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು 2021ರ ಅನ್ವಯ ಹಾಗು ಕೆಆರ್‌ಐಡಿಎಲ್ ವ್ಯಂದ ಮತ್ತು ನೇಮಕಾತಿ ನಿಯಮಗಳ ಜನ್ಯವಾಗಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ. ಅರ್ಹ ಅಭ್ಯರ್ಥಿಗಳು ಪ್ರಾಧಿಕಾರವು ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗೆ ಹಾಜರಾಗಬೇಕು.

1. ಹುದ್ದೆಗಳ ವಿವರ

ಕ್ರ. ಸಂ.	ಹುದ್ದೆಗಳ ಹೆಸರಾಮ	ವೇತನ ಶ್ರೇಣಿ	ಒಟ್ಟು ಹುದ್ದೆಗಳ ಸಂಖ್ಯೆ	
			ಮಿಕ್ಕುಳಿದ ವೃಂದ	ಕಲ್ಯಾಣ ಕರ್ನಾಟಕ ವೃಂದ
01	ಸಹಾಯಕ ಅಭಿಯಂತರರು ಗ್ರೇಡ್-1 (ಸಿವಿಲ್)	ರೂ. 43100 - 83900	35	08
02	ಕಿರಿಯ ಅಭಿಯಂತರರು (ಸಿವಿಲ್)	ರೂ. 33450 - 62600	15	03
03	ಪ್ರಥಮ ದರ್ಜೆ ಸಹಾಯಕರು	ರೂ. 27650 - 52650	03	02
04	ದ್ವಿತೀಯ ದರ್ಜೆ ಸಹಾಯಕರು	ರೂ. 21400 - 42000	08	02

ಹುದ್ದೆವಾರು ಮತ್ತು ಪ್ರವರ್ಗವಾರು ಹುದ್ದೆಗಳ ವಿವರಗಳನ್ನು ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ನಲ್ಲಿ ಪ್ರಕಟಿಸಲಾಗುವುದು.

2) ಮೀಸಲಾತಿ ಸೌಲಭ್ಯ: ಮೀಸಲಾತಿ ರಹಿತ

3) ವಯೋಮಿತಿ / ಶುಲ್ಕ: ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಕನಿಷ್ಠ 18 ವರ್ಷಗಳು ತುಂಬಿರತಕ್ಕದ್ದು ಹಾಗೂ ಈ ಕೆಳಕಂಡ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು:

ಅಭ್ಯರ್ಥಿಗಳು	ಗರಿಷ್ಠ ವಯೋಮಿತಿ	ಶುಲ್ಕ
ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳಿಗೆ	35 ವರ್ಷಗಳು	ರೂ. 750/-
ಪ್ರವರ್ಗ 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳಿಗೆ	38 ವರ್ಷಗಳು	
ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಪ್ರವರ್ಗ-1 ಅಭ್ಯರ್ಥಿಗಳಿಗೆ	40 ವರ್ಷಗಳು	ರೂ. 375/-

ಈಗಾಗಲೇ ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು, ಮಾಜಿ ಸೈನಿಕರು, ಎನ್.ಸಿ.ಸಿ ಪರೀಕ್ಷಕರು, ಗ್ರಾಮ ಸಮೂಹ ಪರಿಕೀಲಕರು, ಅಂಗವಿಕಲ ಅಭ್ಯರ್ಥಿಗಳು, ಚೇತ ಕಾರ್ಮಿಕರು, ಜನಗಣತಿ ಮತ್ತು ವಿಧವೆ ಅಭ್ಯರ್ಥಿಗಳಿಗೆ ಗರಿಷ್ಠ ವಯೋಮಿತಿಯಲ್ಲಿ ನೇಮಕಾತಿ ನಿಯಮಗಳ ಅನ್ವಯ ಸಡಿಲಿಕೆ ಇದ್ದು ಅಂತಹ ಅಭ್ಯರ್ಥಿಗಳು ವೆಬ್‌ಸೈಟಿನಲ್ಲಿರುವ ವಿವರವಾದ ಅಧಿಸೂಚನೆಯನ್ನು ನೋಡಬಹುದು.

ಅಂಗವಿಕಲ ಅಭ್ಯರ್ಥಿಗಳಿಗೆ ಶುಲ್ಕ ವಿನಾಯಿತಿ ಇದೆ. (ಕೇ.ಆ.ಕ್ಕಿಂತ ಹೆಚ್ಚು ಅಂಗವಿಕಲತೆ ಹೊಂದಿರುವವರು ಮತ್ತು ಅದಕ್ಕೆ ಸಂಬಂಧಿಸಿದಂತೆ ಜಿಲ್ಲಾ ವೈದ್ಯಾಧಿಕಾರಿಗಳಿಂದ ಪ್ರಮಾಣ ಪತ್ರ ಹೊಂದಿರುವವರು) ಆದರೆ ರೂ. 250/- ಪ್ರಕ್ರಿಯೆ ಶುಲ್ಕವನ್ನು ಅಂಗವಿಕಲ ಅಭ್ಯರ್ಥಿಗಳು ಕಡ್ಡಾಯವಾಗಿ ಪಾವತಿಸಬೇಕು.

ಸೂಚನೆ: ಶುಲ್ಕವನ್ನು ಕಂಪ್ಯೂಟರೈಸ್ಡ್ ಅಂಚೆ ಕಚೇರಿಗಳಲ್ಲಿ ಮಾತ್ರ ಪಾವತಿಸಬೇಕು. ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚಿನ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಇಚ್ಛಿಸಿದ್ದಲ್ಲಿ, ಒಂದೇ ಅರ್ಜಿಯಲ್ಲಿ ಸಲ್ಲಿಸಬೇಕು, ಆದರೆ ಅಂತಹ ಅಭ್ಯರ್ಥಿಗಳು ಪ್ರತಿ ಹುದ್ದೆಗೆ ಪ್ರತ್ಯೇಕವಾಗಿ ಶುಲ್ಕವನ್ನು ಪಾವತಿಸಬೇಕು.

4) ಅರ್ಜಿ ಸಲ್ಲಿಸುವ ವಿಧಾನ:

ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ನಲ್ಲಿ ತೋರಿಸಿರುವ ಲಿಂಕ್ ಅನ್ನು ಆಯ್ಕೆ ಮಾಡಿ ಆನ್ ಲೈನ್ ಮುಖಾಂತರ ಅರ್ಜಿಯನ್ನು ಭರ್ತಿಮಾಡಬೇಕು. ಪೆನ್ ಮತ್ತು ಪೇಪರ್ ಉಪಯೋಗಿಸಿ ಅರ್ಜಿಯನ್ನು ಸಲ್ಲಿಸುವ ವಿಧಾನ ಇರುವುದಿಲ್ಲ.

ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿನಾಂಕ	28-03-2022 ಬೆಳಿಗ್ಗೆ 11.00 ರಿಂದ
ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ	20-04-2022 ರಾತ್ರಿ 11.59 ವರೆಗೆ
ಇ-ಚೋಸ್ಟ್ ಅಪ್ಲಿಕೇಷನ್‌ನಲ್ಲಿ ಶುಲ್ಕವನ್ನು ಪಾವತಿ ಮಾಡಲು ಕೊನೆಯ ದಿನಾಂಕ	22-04-2022 ಕಚೇರಿ ವೇಳೆಯಲ್ಲಿ

5) ಸ್ಪರ್ಧಾತ್ಮಕ ಪರೀಕ್ಷೆಯ ವಿವರಗಳು:

ಸ್ಪರ್ಧಾತ್ಮಕ ಪರೀಕ್ಷೆಯನ್ನು ಬೆಂಗಳೂರು, ಮೈಸೂರು, ದಾವಣಗೆರೆ, ಬೆಳಗಾವಿ, ಮತ್ತು ಕಲುಬುರ್ಗಿ ಕೇಂದ್ರಗಳಲ್ಲಿ ನಡೆಸಲಾಗುವುದು. ಪರೀಕ್ಷೆಗಳ ದಿನಾಂಕಗಳನ್ನು ಅಧಿಸೂಚಿಸಿದಾಗ ಪ್ರವೇಶ ಪತ್ರಗಳನ್ನು ಪ್ರಾಧಿಕಾರದ ಅಂತರ್ಜಾಲದಿಂದ ಅಭ್ಯರ್ಥಿಗಳು ಡೌನ್‌ಲೋಡ್ ಮಾಡಿಕೊಳ್ಳಬೇಕು. ಅಭ್ಯರ್ಥಿಗಳಿಗೆ ಪ್ರವೇಶ ಪತ್ರಗಳನ್ನು ಪ್ರತ್ಯೇಕವಾಗಿ ರವಾನಿಸಲಾಗುವುದಿಲ್ಲ. ಸ್ಪರ್ಧಾತ್ಮಕ ಪರೀಕ್ಷೆಯ ವೇಳಾಪಟ್ಟಿಯನ್ನು ಪ್ರಾಧಿಕಾರದ ವೆಬ್‌ಸೈಟಿನಲ್ಲಿ ನಂತರ ಪ್ರಕಟಿಸಲಾಗುವುದು.

ಸ್ಪರ್ಧಾತ್ಮಕ ಪರೀಕ್ಷೆಯ ವಿವರಗಳು

ಕ್ರ. ಸಂ	ಹುದ್ದೆ	ಪತ್ರಿಕೆ	ಅಂಕಗಳು	ಒಟ್ಟು ಪ್ರಶ್ನೆಗಳು	ಅವಧಿ	
01	ಸಹಾಯಕ ಅಭಿಯಂತರರು ಗ್ರೇಡ್-1 (ಸಿವಿಲ್)	ಪತ್ರಿಕೆ-1	100	100	ಎರಡು ಗಂಟೆಗಳು	ವಸ್ತು ನಿಷ್ಠ ಬಹು ಆಯ್ಕೆ ಮಾದರಿ
		ಪತ್ರಿಕೆ-2	200	100	ಮೂರು ಗಂಟೆಗಳು	
02	ಕಿರಿಯ ಅಭಿಯಂತರರು (ಸಿವಿಲ್)	ಪತ್ರಿಕೆ-1	100	100	ಎರಡು ಗಂಟೆಗಳು	
		ಪತ್ರಿಕೆ-2	200	100	ಮೂರು ಗಂಟೆಗಳು	
03	ಪ್ರಥಮ ದರ್ಜೆ ಸಹಾಯಕರು	-	200	100	ಮೂರು ಗಂಟೆಗಳು	
04	ದ್ವಿತೀಯ ದರ್ಜೆ ಸಹಾಯಕರು	-	200	100	ಮೂರು ಗಂಟೆಗಳು	

ಋಣಾತ್ಮಕ ಮೌಲ್ಯಮಾಪನವಿದ್ದು, ಪ್ರಶ್ನೆಗಳಿಗೆ ಹಂಚಿಕೆ ಮಾಡಲಾದ ಅಂಕಗಳಲ್ಲಿ, ಪ್ರತಿ ತಪ್ಪು ಉತ್ತರಗಳಿಗೆ ನಾಲ್ಕನೇ ಒಂದು ಭಾಗದಷ್ಟು (1/4) ಅಂಕಗಳನ್ನು ಕಡಿತಗೊಳಿಸಲಾಗುವುದು.

6) ಕಡ್ಡಾಯ ಕನ್ನಡ ಭಾಷಾ ಪರೀಕ್ಷೆ. (ಎಸ್‌ಎಸ್‌ಎಲ್‌ಸಿ ಹಂತದಲ್ಲಿನ ಪ್ರಥಮ ಭಾಷೆ ಕನ್ನಡ ಮಟ್ಟ) ಎಲ್ಲಾ ಅಭ್ಯರ್ಥಿಗಳಿಗೆ ಗರಿಷ್ಠ 150 ಅಂಕಗಳಿಗೆ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯನ್ನು ನಡೆಸಲಾಗುವುದು.

7) ಈ ಮೇಲಿನ ಹುದ್ದೆಗಳಿಗೆ ಸಂಬಂಧಿಸಿದಂತೆ ಆಯಾ ಹುದ್ದೆಗಳಿಗೆ ವೈಕಲಿಕ ಅಗತ್ಯ ಅರ್ಹತೆ ವಿವರ, ಸ್ಪರ್ಧಾತ್ಮಕ ಪರೀಕ್ಷೆಯ ಪತ್ರಿಕೆಗಳು, ಆಯ್ಕೆ ಪ್ರಕ್ರಿಯೆ ಮತ್ತು ನೇಮಕಾತಿಯ ವಿವರ ಹಾಗೂ ಪ್ರವರ್ಗವಾರು ಮತ್ತು ಹುದ್ದೆವಾರು ವಿವರಗಳನ್ನು ಕೆಇಎ ವೆಬ್‌ಸೈಟ್ http://kea.kar.nic.in ಗೆ ಭೇಟಿ ನೀಡಲು ಕೋರಿದೆ. **ಅಭ್ಯರ್ಥಿಗಳು ಕಡ್ಡಾಯವಾಗಿ ನೋಡಿ, ಅರ್ಥೈಸಿಕೊಂಡು ನಂತರ ಅರ್ಜಿ ಸಲ್ಲಿಸುವುದಾಗಿದೆ.**

ಗಮನಿಸಿ:


1. ಕೇವಲ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿವುದು, ಸ್ಪರ್ಧಾತ್ಮಕ ಪರೀಕ್ಷೆಗೆ ಹಾಜರಾಗುವುದು ಮತ್ತು ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಅರ್ಹತೆ ಪಡೆಯುವುದರಿಂದ ಅಭ್ಯರ್ಥಿಗಳಿಗೆ ಈ ಮೇಲ್ಕಂಡ ಹುದ್ದೆಗಳ ನೇಮಕಾತಿಗೆ ಯಾವುದೇ ಹಕ್ಕನ್ನು ನೀಡುವುದಿಲ್ಲ. ನೇಮಕಾತಿಯು ಸರ್ಕಾರವು ನಿಗದಿಪಡಿಸಬಹುದಾದ ಅರ್ಹತಾ ಮಾನದಂಡಗಳಿಗೆ ಒಳಪಟ್ಟಿರುತ್ತದೆ.
2. ಮೇಲಿನ ಯಾವುದೇ ನಿಯಮಗಳು / ಕಾರ್ಯವಿಧಾನಗಳಿಗೆ ಸಂಬಂಧಿಸಿದಂತೆ ವ್ಯತ್ಯಾಸ ಅಥವಾ ಅಸ್ಪಷ್ಟತೆ ಕಂಡು ಬಂದಲ್ಲಿ, ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977 (ತಿದ್ದುಪಡಿಗಳು), ಕರ್ನಾಟಕ ನಾಗರಿಕ ಸೇವಾ (ನೇರ ನೇಮಕಾತಿ) (ಸಾಮಾನ್ಯ ನಿಯಮಗಳು) 2021 ಹಾಗು ಕೆಆರ್‌ಐಡಿಎಲ್ ವ್ಯಂದ ಮತ್ತು ನೇಮಕಾತಿ ಇತರೆ ನಿಯಮಗಳಲ್ಲಿರುವಂತೆ ಅನ್ವಯಿಸುತ್ತದೆ.

ಸಹಿ/-
(ಎಸ್. ರಮ್ಯ, ಭಾ.ಆ.ಸೇ.)
ಕಾರ್ಯನಿರ್ವಾಹಕ ನಿರ್ದೇಶಕರು

ವಾಣಾಸಂಖ/ಚೆಂ.ಸ/3782/2021-22

ಕೋವಿಡ್-19. ಜೀವಂತ ಬೇಡ; ಮುನ್ನೆಚ್ಚರಿಕೆ ಇರಲಿ.


ಮಾಸ್ಕ್ ಧರಿಸಿ



ದೈಹಿಕ ಅಂತರ ಪಾಲಿಸಿ


ಕೈಗಳ ಸ್ವಚ್ಛತೆ ಕಾಪಾಡಿಕೊಳ್ಳಿ

https://www.freshersnow.com/government-jobs-india/